**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194**

**ವಾರ್ಡ್ ಕಛೇರಿಯಲ್ಲಿ ದಿನಾಂಕ: 24-06-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

| ಹಾಜರಿದ್ದವರು | ಗೈರುಹಾಜರು |
|---|---|
| 1. ಶ್ರೀಮತಿ ವಿ.ಕೆ ರಮಾಮಣಿ, ಉಪ ಆಯುಕ್ತರು (ಮಾಹಿತಿ ತಂತ್ರಜ್ಞಾನ) ಹಾಗೂ ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>2. ಶ್ರೀ ರಮೇಶ್, ವೈ.ಸಿ, ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ.<br>3. ಶ್ರೀ ಲಕ್ಷ್ಮೀಪತಿ, ವೈದ್ಯಾಧಿಕಾರಿಗಳು, ಗೊಟ್ಟಿಗೆರೆ.<br>4. ಶ್ರೀ ಬಾಲಾಜಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, (ಎಸ್.ಡಬ್ಲ್ಯೂ.ಡಿ)ಗೊಟ್ಟಿಗೆರೆ.<br>5. ಶ್ರೀ ವಿನಾಯಕ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೊಟ್ಟಿಗೆರೆ.<br>6. ಶ್ರೀ ಮಾರುತಿ, ವಾರ್ಡ್ ಅಭಿಯಂತರರು, ಗೊಟ್ಟಿಗೆರೆ<br>7. ಶ್ರೀಮತಿ ಪ್ರೀತಿ, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ), ಗೊಟ್ಟಿಗೆರೆ<br>8. ಶ್ರೀಮತಿ ಕೀರ್ತಿ, ಅಧ್ಯಕ್ಷರು, ಹಿಮಗಿರಿ ಮೆಡೋಸ್<br>9. ಶ್ರೀ ಸುದರ್ಶನ್ ರಾವ್, ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್<br>10. ಶ್ರೀಮತಿ ಸ್ವರೂಪ, ಕ್ಲಾಸಿಕ್ ಆರ್ಚರ್ಡ್ಸ್<br>11. ಶ್ರೀ ಜಿ.ಎಸ್.ರಾವ್, ಅಧ್ಯಕ್ಷರು, ಎಚ್ ಎಂ ವರ್ಲ್ಡ್ ಸಿಟಿ<br>12. ಶ್ರೀ ನಾಗರಾಜ್ ರಾವ್, ಅಧ್ಯಕ್ಷರು, ಪರಿವರ್ತನಾ ಸಂಘ<br>13. ಶ್ರೀ ಶಶಿಧರ್, ಪರಿವರ್ತನಾ ಸಂಘ | 1. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಗೊಟ್ಟಿಗೆರೆ. |

**ದಿನಾಂಕ: 24-06-2021 ರಂದು ಮಧ್ಯಾಹ್ನ 4:00 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.**

**1. ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಬಗ್ಗೆ.**

I. ವೈದ್ಯಾಧಿಕಾರಿಗಳು, ಪಿ.ಹೆಚ್.ಸಿ ಗೊಟ್ಟಿಗೆರೆ ರವರು ಮಾತನಾಡುತ್ತಾ ಪ್ರಸ್ತುತ ಕೋವಿಡ್-19 ಪ್ರಕರಣಗಳು ಇಳಿಮುಖ ಖಂಡಿದ್ದರೂ ಸಹ ILI/SARI/Covid-19 ನಂತಹ ಲಕ್ಷಣಗಳು ಕಂಡುಬಂದ ಕೂಡಲೇ ಪರೀಕ್ಷೆ ಕೈಗೊಳ್ಳಲು ಹಾಗೂ ಕೋವಿಡ್ ಸೂಕ್ತ ನಡವಳಿಯನ್ನು ಪಾಲಿಸಲು ಕೋರಿದರು.

II. ಮುಂದುವರೆದು, ಅರ್ಹರಿರುವ ಸಾರ್ವಜನಿಕರು Cowin App ಅಥವಾ Walk in ಮೂಲಕ Covisheild ಹಾಗೂ ವಾರ್ಡ್ ಕಛೇರಿಯಲ್ಲಿ Covaxin ಲಸಿಕೆಯನ್ನು ಪಡೆಯಲು ಕೋರುತ್ತಾ ಗೊಟ್ಟಿಗೆರೆಯ ಸರ್ಕಾರಿ ಶಾಲೆಯಲ್ಲಿ 45 ಕ್ಕಿಂತ ಹೆಚ್ಚು ವಯಸ್ಸುಳ್ಳ ಸಾರ್ವಜನಿಕರು ಲಸಿಕೆ ಪಡೆಯಬಹುದಾಗಿದ್ದು, ದಿನಾಂಕ: 07-05-2021 ರ ಹಾಗೂ ಸರ್ಕಾರದ ಆದೇಶದನ್ವಯ ಗುರುತಿಸಲಾಗಿರುವ 18 ವರ್ಷ ಮೇಲ್ಪಟ್ಟ ಅರ್ಹ ಸಾರ್ವಜನಿಕರು ವಿವಿಧ ಬಡಾವಣೆಗಳಲ್ಲಿ ದೈನಂದಿನ ಹಮ್ಮಿಕೊಳ್ಳುವ ಲಸಿಕೆ ಶಿಬಿರಗಳಲ್ಲಿ ಲಸಿಕೆ ಪಡೆಯಬಹುದಾಗಿದೆ ಎಂದು ತಿಳಿಸಿದರು.

**2. ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಂದ ಅನುಷ್ಠಾನಗೊಳ್ಳುತ್ತಿರುವ ಕುಡಿಯುವ ನೀರು ಹಾಗೂ ಒಳಚರಂಡಿ ಕಾಮಗಾರಿಗಳ ಪ್ರಗತಿ ಮತ್ತು ಸಂಬಂಧಿಸಿದ ವಿಷಯಗಳ ಬಗ್ಗೆ.**

I. ಸೌತ್ ಅವೆನ್ಯೂ ಬಡಾವಣೆಯಲ್ಲಿ 7 ರಿಂದ 9ನೇ ಅಡ್ಡರಸ್ತೆಯ ಮಧ್ಯ ಒಳಚರಂಡಿ ನೀರು ಸರಾಗವಾಗಿ ಹರಿಯುವಂತೆ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ಸಹಾಯಕ ಅಭಿಯಂತರರು ರವರು ಮುಂದಿನ ವಾರದಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.



Scanned by CamScanner

II. ರಾಯಲ್ ಕೌಂಟಿ ಬಡಾವಣೆಗೆ ಸಂಬಂಧಪಟ್ಟಂತೆ ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಮನೆಗಳಿಗೆ ನೀರು ಸರಬರಾಜು ವ್ಯವಸ್ಥೆಯನ್ನು ಕಲ್ಪಿಸಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು.

**3. ರಸ್ತೆ ಪಾದಚಾರಿ ಹಾಗೂ ಮಳೆ ನೀರು ಚರಂಡಿ ಕಾಮಗಾರಿ ಬಗ್ಗೆ.**

I. ರಾಯಲ್ ಕೌಂಟಿ ಬಡಾವಣೆಯ 80 ಫೀಟ್ ರಸ್ತೆ ಹಾಗೂ 7ನೇ ಬ್ಲಾಕ್, 9ನೇ ಹಂತ, ಜೆ.ಪಿ ನಗರ ಶಂಕರ್ ನಾಗ್ ರಸ್ತೆಗಳಲ್ಲಿ ಉಬ್ಬು (Humps) ನಿರ್ಮಾಣದ ಸಂಬಂಧ ವಾರ್ಡ್ ಅಭಿಯಂತರರು ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ಅಭಿಯಂತರರೊಂದಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು ಹಾಗೂ ವಾರ್ಡಿಗೆ ಸಂಬಂಧಪಟ್ಟ TEC ಅಭಿಯಂತರರು ಮುಂದಿನ ಸಭೆಗೆ ಪ್ರಗತಿ ವರದಿಯೊಂದಿಗೆ ಹಾಜರಾಗುವುದು.

II. ರಾಯಲ್ ಕೌಂಟಿ ಬಡಾವಣೆಯಲ್ಲಿರುವ 80 ಫೀಟ್ ರಸ್ತೆಯ ಪ್ರಾರಂಭದ ಹಾಗೂ ಕೊನೆಯ ಭಾಗಗಳಲ್ಲಿ ರಸ್ತೆಯನ್ನು ಅಗಲೀಕರಣ ಮಾಡಲು ಈ ಹಿಂದೆ ಪಾಲಿಕೆಯು ಸಮೀಕ್ಷೆಗೊಂಡಿರುವುದಾಗಿ ತಿಳಿಸುತ್ತಾ, ತ್ವರಿತವಾಗಿ ಕಾಮಗಾರಿಯನ್ನು ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃಹತ್ ರಸ್ತೆಗಳು) ರವರು ಪ್ರಗತಿ ವರದಿ ಕೋರಿದ್ದು, ವಾರ್ಡ್ ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃಹತ್ ರಸ್ತೆಗಳು) ರವರೊಂದಿಗೆ ಸಮನ್ವಯ ಸಾಧಿಸಿ ಕ್ರಮವಸಹಿಲು ಸೂಚಿಸಲಾಯಿತು.

III. ರಾಯಲ್ ಕೌಂಟಿ ಬಡಾವಣೆಯ ರಸ್ತೆ ಪಾದಚಾರಿಗಳಲ್ಲಿ ವ್ಯಾಪಾರಿ ಅಂಗಡಿಗಳನ್ನು ತೆರುವುಗೊಳಿಸುವ ಬಗ್ಗೆ, ಈ ಹಿಂದೆ ಎರಡು ಬಾರಿ ಸದರಿ ವ್ಯಾಪಾರಸ್ಥರನ್ನು ತೆರವುಗೊಳಿಸಲಾಗಿದ್ದು ವ್ಯಾಪರಸ್ಥರು ಮರುಕಳಿಸುತ್ತಿದ್ದು, ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಅಭಿಯಂತರರು ಹಾಗೂ ಸಂಚಾರಿ ಪೋಲೀಸರ ತಂಡವು ಮುಂದಿನ ವಾರದಲ್ಲಿ ಸದರಿ ಪಾದಚಾರಿಯನ್ನು ತೆರವುಗೊಳಿಸುವುದು ಹಾಗೂ ಅವರು ಮರುಕಳಿಸದಂತೆ ನಿಯತಕಾಲಿಕವಾಗಿ ಪರಿಶೀಲಿಸುವುದು.

IV. ಬಿ.ಜಿ.ಎಸ್ ಬಡಾವಣೆಯಲ್ಲಿರುವ ರಾಜಕಾಲುವೆಯನ್ನು ಸ್ವಚ್ಛಗೊಳಿಸಲು ಶ್ರೀ. ನಾಗರಾಜ್ ರವರು ಕೋರಿದ್ದು, ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಎಸ್.ಡಬ್ಲ್ಯೂ.ಡಿ) ರವರು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

**4. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.**

I. ಪೌರ ಕಾರ್ಮಿಕರಿಗೆ ಹಾಗೂ Auto Tipper / Compactor ಚಾಲಕರಿಗೆ ಒದಗಿಸಿರುವ Hand Gloves, Mask, Boots ಇತ್ಯಾದಿಗಳನ್ನು ಕಡ್ಡಾಯವಾಗಿ ಧರಿಸುವುದನ್ನು ಮೇಲ್ವಿಚಾರಿಸಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. ಗುತ್ತಿಗೆದಾರರು ಒದಗಿಸಿರುವ Hand Gloves ಗಳನ್ನು ಧೀರ್ಘಕಾಲ ಧರಿಸಲು ಕಷ್ಟಸಾಧ್ಯವಾಗಿರುವ ಬಗ್ಗೆ Auto Tipper ಚಾಲಕರು ತಿಳಿಸಿದ್ದು, ಪ್ರಸ್ತುತ ಪೌರಕಾರ್ಮಿಕರುಗಳಿಗೆ ನೀಡುತ್ತಿರುವ Hand Gloves ನಂತಹ ದನ್ನೆ Auto Tipper ಚಾಲಕರಿಗೂ ಸಹ ನೀಡಲು ಗುತ್ತಿಗೆದಾರರಿಗೆ ಸೂಚಿಸಲು ತಿಳಿಸಲಾಯಿತು.

II. ಹಸಿ ಕಸವನ್ನು ಸಂಗ್ರಹಿಸುವ Auto Tipper ಸತತವಾಗಿ 5 ದಿನಗಳು ಹಿಮಗಿರಿ ಮೆಡೋಸ್ ಹಾಗೂ ಅಕ್ಕ ಪಕ್ಕ ಅಪಾರ್ಟ್‌ಮೆಂಟ್‌ಗಳಿಗೆ ಬಾರದ ಕಾರಣ ಸಾರ್ವಜನಿಕರಿಗೆ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ ಚರ್ಚಿಸಲಾಯಿತು. ವಾಹನವು ದುರಸ್ಥಿಗೊಂಡ ಪಕ್ಷದಲ್ಲಿ ಬದಲಿ ವ್ಯವಸ್ಥೆ ಕಲ್ಪಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಅಗತ್ಯ ಕ್ರಮ ವಹಿಸುವುದು.

**5. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.**

I. ಅಧ್ಯಕ್ಷರು, ಹಿಮಗಿರಿ ಮೆಡೋಸ್ ರವರು ತಮ್ಮ ಬಡಾವಣೆಯ ಮುಖ್ಯ ರಸ್ತೆಯಲ್ಲಿ ದುರಸ್ಥಿಗೊಂಡಿದ್ದ ದೀಪಗಳನ್ನು ಸರಿಪಡಿಸಿರುವುದಾಗಿ ತಿಳಿಸುತ್ತಾ Transformer ದುರಸ್ಥಿ ಕಾಮಗಾರಿಯನ್ನು ಕೈಗೊಳ್ಳಲು ಕೋರಿದ್ದು, ಈ ಸಂಬಂಧ ಶ್ರೀ. ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ಅಗತ್ಯ ಕ್ರಮ ವಹಿಸುತ್ತಿರುವುದಾಗಿ ದೂರವಾಣಿ ಮುಖಾಂತರ ತಿಳಿಸಿದರು.

Scanned by CamScanner

6. ಇತರೆ ವಿಷಯಗಳು.

I. ರಾಯಲ್ ಕೌಂಟಿ ಬಡಾವಣೆಯಲ್ಲಿ ಇತ್ತೀಚಿಗೆ ಮನೆ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ ಪರಿವರ್ತನ ಸಂಘದ ಅಧ್ಯಕ್ಷರು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ತಿಳಿಸಲಾಯಿತು.

**ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, BWSSB , ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲಿಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.

Scanned by CamScanner